ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಕರ್ನಾಟಕ ಮೋಟಾರು ವಾಹನಗಳ ತೆರಿಗೆ(ತಿದ್ದುಪಡಿ) ವಿಧೇಯಕ, 2005

ಪರ್ಯಾಲೋಚನಾ ಪ್ರಸ್ತಾವ

(ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, 2005ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"2005ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು ಖಂಡ 2ರಿಂದ 4ರವರೆಗೆ

ಅಧ್ಯಕ್ಷರು: "ಖಂಡ 2ರಿಂದ 4ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ರಿಂದ 4ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, 2005ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"2005ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳಿಗೆ ತಿದ್ದುಪಡಿ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿ): ಮಾನ್ಯ ಅಧ್ಯಕ್ಷರೆ,

"ಇಲಾಖಾ ವಿಷಯ ಸಮಿತಿಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವಿಧಾನಸಭೆಯ ಕಾರ್ಯ ವಿಧಾನ ಹಾಗೂ ನಡವಳಿಕೆಯ 293ರಿಂದ 300ರವರೆಗಿನ ನಿಯಮಗಳನ್ನು ರದ್ದುಪಡಿಸುವ ಪ್ರಸ್ತಾವನೆಯನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು: ಪ್ರಸ್ತಾವನೆ ಏನೆಂದರೆ,

"ಇಲಾಖಾ ವಿಷಯ ಸಮಿತಿಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವಿಧಾನ ಸಭೆಯ ಕಾರ್ಯ ವಿಧಾನ ಮತ್ತು ನಡವಳಿಕೆಯ 293ರಿಂದ 300ರ ವರೆಗಿನ ನಿಯಮಗಳನ್ನು ರದ್ದು ಪಡಿಸುವ ಪ್ರಸ್ತಾವನೆಯನ್ನು ಈ ಸದನವು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಅಧ್ಯಕ್ಷರು: ಈಗ ಸದನವನ್ನು ಮುಂದೂಡಿ ಪುನಃ ಸಂಜೆ 4–30 ಗಂಟೆಗೆ ಸೇರಲಾಗುವುದು.

(ಸದನವನ್ನು ಮಧ್ಯಾಹ್ನ 3 ಗಂಟೆ 2 ನಿಮಿಷಕ್ಕೆ ಮುಂದೂಡಿ ಪುನಃ ಸಂಜೆ 4–30 ಗಂಟೆಗೆ ಸೇರಲು ನಿಶ್ಚಯಿಸಿತು.)